# ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ

4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು – 560 041


---

**ವಿಷಯ:** ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಹೊಸ ಪಿಂಚಣಿ ಯೋಜನೆ (ಎನ್.ಪಿ.ಎಸ್.) ಜಾರಿಗೊಳಿಸುವ ಕುರಿತು.

**ಉಲ್ಲೇಖ:**
1) ಸರ್ಕಾರದ ಆದೇಶ ಸಂಖ್ಯೆ. ಆಕುಕ 59 ಎಂಎಸ್ಎಫ್ 2017, ದಿನಾಂಕ: 27.08.2020.
2) ಸರ್ಕಾರದ ಪತ್ರ ಸಂಖ್ಯೆ ಆಇ 15 ಪಿ.ಇ.ಎನ್. 2021, ದಿನಾಂಕ: 16.02.2021.
3) ಸರ್ಕಾರದ ಸುತ್ತೋಲೆ ಸಂಖ್ಯೆ. ಆಇ(ವಿ) 209 ಪಿಇಎಸ್ 2012, ದಿನಾಂಕ: 21.02.2015.

–*–*–

**ಪ್ರಸ್ತಾವನೆ:–**

ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ದಿನಾಂಕ: 01.04.2006ರ ನಂತರ ಖಾಯಂ ಆಗಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ವೃಂದದ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಭವಿಷ್ಯ ವರ್ತಿಯಾಗಿ ಹೊಸ ಪಿಂಚಣಿ ಯೋಜನೆಯನ್ನು (ಎನ್.ಪಿ.ಎಸ್.) ಕಡ್ಡಾಯವಾಗಿ ಜಾರಿಗೊಳಿಸಿ ಆದೇಶಿಸಲಾಗಿದೆ. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿಯೂ ಈ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ ನಿರ್ಣಯ ತೆಗೆದುಕೊಳ್ಳಬೇಕಾಗಿರುತ್ತದೆ.

ದಿನಾಂಕ: 09.10.2020ರಂದು ನಡೆದ ಸಿಂಡಿಕೇಟ್ ಸಭೆಯ ವಿಷಯ ಸಂಖ್ಯೆ. 152/21ರಲ್ಲಿ ತೆಗೆದುಕೊಂಡ ನಿರ್ಣಯದಂತೆ ಕಾನೂನು ಸಲಹೆಗಾರರ ಅಭಿಪ್ರಾಯ ಪಡೆದು, ಎನ್.ಪಿ.ಎಸ್. ಯೋಜನೆಯು ಅನುಧಾನ ರಹಿತ ಸ್ವಾಯತ್ತ ವಿಶ್ವವಿದ್ಯಾಲಯಗಳಿಗೆ ಅನ್ವಯಿಸುವುದೇ ಎಂಬ ಬಗ್ಗೆ ಸರ್ಕಾರದ ಆರ್ಥಿಕ ಇಲಾಖೆಯ ಸ್ಪಷ್ಟೀಕರಣ ಕೋರಲಾಗಿತ್ತು.

ಆರ್ಥಿಕ ಇಲಾಖೆಯು ಉಲ್ಲೇಖ (2) ರ ದಿನಾಂಕ: 16.02.2021ರ ಪತ್ರದಲ್ಲಿ, ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ–ಮಂಡಳಿಗಳು, ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ರಾಜ್ಯ ಅನುದಾನಿತ ಸಂಸ್ಥೆಗಳು ತಮ್ಮ ಸ್ವಂತ ಸಂಪನ್ಮೂಲಗಳಿಂದ ವೆಚ್ಚವನ್ನು ಭರಿಸುವ ಷರತ್ತಿಗೊಳಪಟ್ಟು ನೂತನ ಪಿಂಚಣಿ ಯೋಜನೆಯನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಸರ್ಕಾರದ ಸುತ್ತೋಲೆ ಸಂಖ್ಯೆ. ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ಸೂಚಿಸಲಾಗಿದೆ ಆದ್ದರಿಂದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಸುತ್ತೋಲೆ ಸಂಖ್ಯೆ. ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015 ಅನ್ವಯವಾಗಲಿದೆ ಎಂದು ತಿಳಿಸಿದೆ.

_________2

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ದಿನಾಂಕ: 01.04.2006ರ ನಂತರ ಐದು ಮಂದಿ ಖಾಯಂ ಹುದ್ದೆಗಳಿಗೆ ನೇಮಕವಾಗಿರುತ್ತಾರೆ. ಈ ಸಿಬ್ಬಂದಿಗಳಿಗೆ ಆರ್ಥಿಕ ಇಲಾಖೆಯ ಆದೇಶಗಳನ್ವಯ ಹೊಸ ಪಿಂಚಣಿ ಯೋಜನೆಯಡಿಯಲ್ಲಿ, ಸಿಬ್ಬಂದಿಗಳು ಅವರ ವೇತನದ 10% ಹಾಗೂ ವಿಶ್ವವಿದ್ಯಾಲಯವು 14% ವಂತಿಗೆಯನ್ನು ಭರಿಸಬೇಕಾಗುವುದು.

ಈ ಹಿನ್ನಲೆಯಲ್ಲಿ ಸರ್ಕಾರದ ಆದೇಶದಂತೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ದಿನಾಂಕ: 01.04.2006ರ ನಂತರ ಖಾಯಂ ಆಗಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹೊಸ ಪಿಂಚಣಿ ಯೋಜನೆಯನ್ನು ಅನುಷ್ಠಾನಗೊಳಿಸಲು ನಿರ್ಣಯಿಸಿದೆ.

**ಕಛೇರಿ ಆದೇಶದ ಸಂಖ್ಯೆ. ಆರ್‌ಜಿಯು/ಇಎಸ್‌ಟಿ/103/2016–17, ದಿನಾಂಕ: 20.05.2021**

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ದಿನಾಂಕ: 01.04.2006ರ ನಂತರ ಖಾಯಂ ಆಗಿ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ, ಹೊಸ ಪಿಂಚಣಿ ಯೋಜನೆಯನ್ನು ದಿನಾಂಕ: 27.08.2020 ರಿಂದ ಪೂರ್ವಾನ್ವಯವಾಗಿ ಅನುಷ್ಠಾನಕ್ಕೆ ತಂದು ಜಾರಿಗೊಳಿಸಲು ಆದೇಶಿಸಿದೆ.

ತತ್ಸಂಬಂಧ ಹೊಸ ಪಿಂಚಣಿ ಯೋಜನೆಯಡಿ ಬರುವ ಸಿಬ್ಬಂದಿಗಳು ದಿನಾಂಕ: 27.08.2020 ರಿಂದ ಪೂರ್ವಾನ್ವಯವಾಗಿ ಅವರ ಪಾಲಿನ 10% ವಂತಿಗೆಯನ್ನು ಪಾವತಿಸಬೇಕಾಗಿದ್ದು, ಅದನ್ನು ಅವರ ಮಾಸಿಕ ವೇತನದಿಂದ 9 ಸಮಾನ ಕಂತುಗಳಲ್ಲಿ ಕಟಾವಣೆ ಮಾಡಲು ನಿರ್ದೇಶಿಸಿದೆ.

**ಕುಲಸಚಿವರು**

**ಗೆ,**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು
2) ಮಾನ್ಯ ಕುಲಪತಿಯವರು / ಕುಲಸಚಿವರು / ಕುಲಸಚಿವರು (ಮೌ) / ಹಣಕಾಸು ಅಧಿಕಾರಿಗಳ ಆಪ್ತ ಕಾರ್ಯದರ್ಶಿಗಳು.
3) ರಾ.ಗಾ.ಆ.ವಿ.ವಿಶ್ವವಿದ್ಯಾಲಯದ ಎಲ್ಲಾ ನಿರ್ದೇಶಕರು / ಉಪ ನಿರ್ದೇಶಕರು / ಉಪ ಕುಲಸಚಿವರು / ಸಹಾಯಕ ಕುಲಸಚಿವರು / ಶಾಖಾಧಿಕಾರಿಗಳು.
4) ಸಿಸ್ಟಮ್ ಅನಾಲಿಸ್ಟ್, ವೆಬ್ ಸರ್ವರ್–ವಿಶ್ವವಿದ್ಯಾಲಯದ ಅಂತರ್ಜಾಲದಲ್ಲಿ ಪ್ರಕಟಿಸಲು.
5) ಸೂಚನಾ ಫಲಕ.
6) ಕಛೇರಿ ಪ್ರತಿ.